# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ. ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 869 (919) |
| ಉತ್ತರಿಸಬೇಕಾದ ದಿನಾಂಕ | : | 24.08.2026 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಸರ ಸೂಕ್ಷ್ಮ ಪ್ರದೇಶವನ್ನು ಈಗಾಗಲೇ ನಿಗದಿಪಡಿಸಲಾಗಿದೆಯೇ; ನಿಗದಿಪಡಿಸಲಾಗಿರುವ ಪರಿಸರ ಸೂಕ್ಷ್ಮ ಪ್ರದೇಶದ ವಿಸ್ತೀರ್ಣವೆಷ್ಟು ಹಾಗೂ ಸದರಿ ವ್ಯಾಪ್ತಿಯಲ್ಲಿ ಬರುವ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮಗಳ ಸಂಖ್ಯೆ ಎಷ್ಟು; ಹಾಗೂ ಸದರಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಜನಸಂಖ್ಯೆ ಎಷ್ಟು; | ಪಶ್ಚಿಮ ಘಟ್ಟಗಳ ಸಂರಕ್ಷಿಸುವ ಕ್ರಮಗಳನ್ನು ಸೂಚಿಸಲು ಭಾರತ ಸರ್ಕಾರವು ರಚಿಸಿರುವ ಡಾ॥ ಕೆ. ಕಸ್ತೂರಿ ರಂಗನ್ ನೇತೃತ್ವದ ಉನ್ನತ ಮಟ್ಟದ ಕಾರ್ಯನಿರತ ತಂಡ 2013 ರಲ್ಲಿ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಭಾರತದ ಆರು ರಾಜ್ಯಗಳ ಅಂದಾಜು 56000 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ (Eco-Sensitive Area) ಗಳಾಗಿ ಶಿಫಾರಸ್ಸು ಮಾಡಲಾಗಿರುತ್ತದೆ. ಅದರಲ್ಲಿ ಕರ್ನಾಟಕದ 20,668 ಚದರ ಕಿಮೀ ಪ್ರದೇಶವು ಒಳಗೊಂಡಿರುತ್ತದೆ.<br><br>ಸದರಿ ಸಮಿತಿಯ ವರದಿಯನ್ನು ಆಧರಿಸಿ, ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯವು ಈ ಹಿಂದೆ ಪಶ್ಚಿಮ ಘಟ್ಟ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸುವ ಸಂಬಂಧ ಕರಡು ಅಧಿಸೂಚನೆಗಳನ್ನು ಹೊರಡಿಸಿರುತ್ತದೆ. ಸಕಾಲದಲ್ಲಿ ಕರಡು ಅಧಿಸೂಚನೆಗಳನ್ನು ಅಂತಿಮಗೊಳಿಸಲು ಸಾಧ್ಯವಾಗದ ಕಾರಣ, ಮೊದಲ ಆರು ಕರಡು ಅಧಿಸೂಚನೆಗಳ ಅವಧಿ ಮುಗಿದಿದ್ದು, ಪ್ರಸ್ತುತ, ಭಾರತ ಸರ್ಕಾರವು ದಿನಾಂಕ:27.07.2026 ರಂದು ಏಳನೇ ಕರಡು ಅಧಿಸೂಚನೆಯನ್ನು ಮರು ಹೊರಡಿಸಿರುತ್ತದೆ.<br><br>ದಿನಾಂಕ:27.07.2026ರ ಕರಡು ಅಧಿಸೂಚನೆಯಲ್ಲಿಯೂ ಹಿಂದಿನ ಕರಡು ಅಧಿಸೂಚನೆಗಳಂತೆಯೇ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿ ರಾಜ್ಯದ 10 ಜಿಲ್ಲೆಗಳನ್ನು ಒಳಗೊಂಡಿರುವ 20,668 ಚದರ ಕಿಮೀ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ (Eco-Sensitive Area)ವೆಂದು ಘೋಷಿಸಲು ಗುರುತಿಸಲಾಗಿರುತ್ತದೆ. ಅವುಗಳು ಬೆಳಗಾವಿ, ಚಾಮರಾಜನಗರ, ಚಿಕ್ಕಮಗಳೂರು, ಕೊಡಗು, ಹಾಸನ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಮೈಸೂರು, ಶಿವಮೊಗ್ಗ, ಹಾಗೂ ಉಡುಪಿ ಜಿಲ್ಲೆಗಳು ಆಗಿದ್ದು, ಈ ಜಿಲ್ಲೆಗಳ ಒಟ್ಟು 39 ತಾಲ್ಲೂಕುಗಳ 1449 ಗ್ರಾಮಗಳನ್ನು ಕರಡು ಅಧಿಸೂಚನೆಯಲ್ಲಿ ಪರಿಸರ ಸೂಕ್ಷ್ಮ ಪ್ರದೇಶದ ವ್ಯಾಪ್ತಿಯಡಿ ನಮೂದಿಸಲಾಗಿದೆ |
| ಆ) | ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಣೆ ಮಾಡಿದರೆ, ಆ ಪ್ರದೇಶದಲ್ಲಿ ಭವಿಷ್ಯದಲ್ಲಿ ರಸ್ತೆ, ಕುಡಿಯುವ ನೀರು ಸೇರಿದಂತೆ ಅತ್ಯಂತ ಅಗತ್ಯವಾದ ಮೂಲ | ಸದರಿ ಕರಡು ಅಧಿಸೂಚನೆಗಳನ್ವಯ ಗಣಿಗಾರಿಕೆ, ಕಲ್ಲುಗಣಿಗಾರಿಕೆ, ಮರಳು ಗಣಿಗಾರಿಕೆ, ಉಷ್ಣ ವಿದ್ಯುತ್ ಸ್ಥಾವರಗಳು, ಕಟ್ಟಡ ನಿರ್ಮಾಣಕ್ಕೆ ಮತ್ತು ಟೌನ್‌ಶಿಪ್ |

| | | |
|---|---|---|
| | ಸೌಕರ್ಯಗಳ ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಸಾಧ್ಯವಿಲ್ಲ, ಕೃಷಿ ಚಟುವಟಿಕೆಗಳಿಗೂ ತೊಂದರೆಯಾಗುವುದರ ಜೊತೆಗೆ ಸದರಿ ವ್ಯಾಪ್ತಿಯಲ್ಲಿ ವಾಸಿಸುವ ಜನರ ಆರ್ಥಿಕ ಮತ್ತು ಸಾಮಾಜಿಕ ಜೀವನದ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಆಂತಕ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | (ನಿರ್ದಿಷ್ಟ ಮಿತಿಗಳನ್ನು ಮೀರಿದ) ಅಭಿವೃದ್ಧಿಗಳನ್ನು ನಿಯಂತ್ರಿಸಲಾಗಿದೆ.<br><br>ಭಾರತ ಸರ್ಕಾರವು ದಿನಾಂಕ:27.07.2026 ರಂದು ಹೊರಡಿಸಿದ ಏಳನೇ ಕರಡು ಅಧಿಸೂಚನೆಯ ಕುರಿತು ರಾಜ್ಯ ಸರ್ಕಾರಗಳ ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಕರಡು ಅಧಿಸೂಚನೆಯ ದಿನಾಂಕದಿಂದ 60 ದಿನಗಳೊಳಗಾಗಿ ಸಲ್ಲಿಸಬೇಕಾಗಿರುತ್ತದೆ. |
| ಇ) | ಸದರಿ ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿರುವ ವ್ಯಾಪ್ತಿಯಲ್ಲಿ ನಿಷೇಧಿಸಿರುವ ಚಟುವಟಿಕೆಗಳಾವುವು; ಹಾಗೂ ಯಾವ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಲಾಗಿದೆ; | ಈ ಹಿಂದಿನ ಕರಡು ಅಧಿಸೂಚನೆಗಳನ್ವಯ ಪರಿಸರ ಸೂಕ್ಷ್ಮ ಪ್ರದೇಶವೆಂದು ಗುರುತಿಸಲ್ಪಟ್ಟಿರುವ ಪ್ರದೇಶದಲ್ಲಿ ನಿರ್ಬಂಧಿಸಿರುವ ಕೆಲವು ಚಟುವಟಿಕೆಗಳನ್ನು ಹೊರತುಪಡಿಸಿ, ನೆಡುತೋಪು ನಿರ್ಮಾಣ, ಕೃಷಿ ಚಟುವಟಿಕೆ ಮತ್ತಾವುದೇ ಚಟುವಟಿಕೆಗಳ ಮೇಲೆ ನಿರ್ದಿಷ್ಟ ನಿಷೇಧ ಹೇರಿರುವುದಿಲ್ಲ. ಮತ್ತು ಅವರ ದೈನಂದಿನ ಚಟುವಟಿಕೆಗಳು ಹಾಗೂ ಜೀವನಾಧಾರಗಳ ಮೇಲೆ ಯಾವುದೇ ದುಷ್ಪರಿಣಾಮಗಳನ್ನು ಬೀರುವುದಿಲ್ಲ. ಈ ಹಿನ್ನೆಲೆಯಲ್ಲಿ ಜನರನ್ನು ಒಕ್ಕಲೆಬ್ಬಿಸುವಂತಹ ಪರಿಸ್ಥಿತಿಯು ಉದ್ಭವಿಸುವುದಿಲ್ಲ. |
| ಈ) | ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿದರೆ ಸದರಿ ವ್ಯಾಪ್ತಿಯ ಗ್ರಾಮಗಳಲ್ಲಿರುವ ಲಕ್ಷಾಂತರ ಜನರಿಗೆ ಭಾರಿ ತೊಂದರೆಯಾಗುತ್ತದೆ ಮತ್ತು ಅವರ ಮೂಲ ನೆಲೆಗಳಲ್ಲಿ ಅವರನ್ನೇ ಬಲವಂತವಾಗಿ ಅತಂತ್ರ ಸ್ಥಿತಿಗೆ ದೂಡಿದಂತಾಗುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರ ವಹಿಸಲಿರುವ ಕ್ರಮಗಳೇನು; | ಮುಂದುವರೆದು, ಡಾ॥ ಕೆ. ಕಸ್ತೂರಿ ರಂಗನ್ ನೇತೃತ್ವದ ಸಮಿತಿಯ ವರದಿಯಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಲ್ಪಟ್ಟಿರುವ ಪ್ರದೇಶಗಳು ಈಗಾಗಲೇ ರಕ್ಷಿತ ಪ್ರದೇಶಗಳು, ಅಧಿಸೂಚಿತ ಅರಣ್ಯಗಳು ಅಥವಾ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಘೋಷಿಸಲ್ಪಟ್ಟು ಸರ್ಕಾರದ ರಕ್ಷಣೆಯ ಅಡಿಯಲ್ಲಿದ್ದು, ಈ ಪ್ರದೇಶಗಳ ಮೇಲೆ ಹೆಚ್ಚಿನ ನಿರ್ಬಂಧಗಳನ್ನು ವಿಧಿಸುವುದು ಸಂರಕ್ಷಣೆಯ ಉದ್ದೇಶಗಳಿಗೆ ಪ್ರತಿಕೂಲವಾಗುವುದಾಗಿ ಹಾಗೂ ಜನರ ಜೀವನೋಪಾಯಕ್ಕೆ ಪ್ರತಿಕೂಲ ಪರಿಣಾಮ ಉಂಟಾಗಬಹುದು ಎಂದು ರಾಜ್ಯ ಸಚಿವ ಸಂಪುಟ ಸಭೆಗಳಲ್ಲಿ ಸದರಿ ವರದಿಯ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು ಹೊರಡಿಸಿರುವ ಹಿಂದಿನ ಕರಡು ಅಧಿಸೂಚನೆಗಳನ್ನು ಸಂಪೂರ್ಣವಾಗಿ ನಿರಾಕರಿಸಲು ನಿರ್ಣಯಿಸಲಾಗಿರುತ್ತದೆ. |
| ಉ) | ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿರುವ ಬಹುತೇಕ ಪ್ರದೇಶವನ್ನು ಅರಣ್ಯ ಸಂರಕ್ಷಣಾ ಕಾಯ್ದೆಯಡಿ ಈಗಾಗಲೇ ಸಂರಕ್ಷಣೆ ಮಾಡಲಾಗುತ್ತಿದ್ದು, ಈ ರೀತಿಯಲ್ಲಿ ಹೆಚ್ಚುವರಿ ನಿರ್ಬಂಧಗಳನ್ನು ಹೇರಿದ್ದಲ್ಲಿ ಜನರನ್ನು ಅನಾವಶ್ಯಕವಾಗಿ ಸಂಕಷ್ಟಕ್ಕೆ ದೂಡಿದಂತಾಗುವುದು, ಇದನ್ನು ತಪ್ಪಿಸಲು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ? | ರಾಜ್ಯ ಸಚಿವ ಸಂಪುಟ ಸಭೆಗಳ ನಿರ್ಣಯಗಳನ್ನು ಅನುಸರಿಸಿ, ಡಾ\|\| ಕಸ್ತೂರಿ ರಂಗನ್ ಸಮಿತಿಯ ವರದಿಯ ಶಿಫಾರಸ್ಸುಗಳನ್ನು ನಿರಾಕರಿಸಿ, ಸದರಿ ವರದಿ ಅನುಷ್ಠಾನದ ಸಂಬಂಧ ಹೊರಡಿಸಿದ ಹಿಂದಿನ ಕರಡು ಅಧಿಸೂಚನೆಗಳನ್ನು ತಿರಸ್ಕರಿಸುವ ರಾಜ್ಯ ಸರ್ಕಾರದ ಸ್ಪಷ್ಟ ನಿಲುವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. |

**ಸಂಖ್ಯೆ:** ಅಪಜೀ 181 ಇಎನ್‌ವಿ 2026

**(ರಾಮಲಿಂಗಾರೆಡ್ಡಿ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು.